ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರುಗಳ ಕುರಿತು

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

1517 (1868) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಖಾಯಂ ಕಾರ್ಮಿಕರ ಸಂಖ್ಯೆ ಎಷ್ಟು ಹಾಗೂ ಗುತ್ತಿಗೆ ಕಾರ್ಮಿಕರ ಸಂಖ್ಯೆ ಎಷ್ಟು ; ಬುದ್ದನ್ನಿ ಮತ್ತು ಊಟಿಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು;

(ಆ) ರಾಯಚೂರು ಜಿಲ್ಲೆಯ ಬುದ್ದಿನ್ನಿ ಚಿನ್ನದ ಗಣಿ ಉದ್ದಿಮೆಯಿಂದ ಆ ಗ್ರಾಮಸ್ಥರಿಗೆ ಆಗುವ ತೊಂದರೆ ನಿರ್ವಾಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸದರಿ ಗ್ರಾಮವನ್ನು ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯ ಬುದ್ದಿನ್ನಿ ಚಿನ್ನದ ಗಣಿ ಸ್ಥಾಪನೆಗೆ ಭೂ ಸ್ವಾಧೀನ ಮಾಡಿಕೊಂಡಿರುವ ಭೂಮಿ ಎಷ್ಟು ; ಸದರಿ ಭೂ ವಂಚಿತ ರೈತರಿಗೆ ಸರ್ಕಾರ ನೀಡಿರುವ ಸೌಲಭ್ಯಗಳು ಏನು ?